**ಕರ್ನಾಟಕ ಸರ್ಕಾರ**

ಸಂಖ್ಯೆ: ಗ್ರಾಅಪ 169 ಸ್ವೀಮರ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹು ಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ:19.10.2016

**ಅಧಿಸೂಚನೆ**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಕಲಂ 64, 201, 269, 237, 43(ಎ), 136 ಮತ್ತು 175ರ ಅಡಿಯಲ್ಲಿ ದಾಖಲಾಗುವ ಅರ್ಜಿಗಳು ಮತ್ತು ಮೇಲ್ಮನವಿಗಳ ಬಗ್ಗೆ ಪರಿಶೀಲಿಸಿ ಈ ಕುರಿತಂತೆ ಅಗತ್ಯ ಮಾಹಿತಿಯನ್ನು ಸಚಿವಾಲಯದ ಕಂದಾಯ ಇಲಾಖೆಗೆ ಒದಗಿಸುವ ಸಲುವಾಗಿ ನಿರ್ದೇಶಕರು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಇವರನ್ನು ಇಲಾಖೆಯ ನೋಡಲ್ ಅಧಿಕಾರಿಯನ್ನಾಗಿ ನೇಮಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಎಸ್.ರಂಗನಗೌಡ) 19/10/2016
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ:

1. ಎಲ್ಲಾ ಜಿಲ್ಲಾ ಪಂಚಾಯಿತಿಗಳ/ತಾಲ್ಲೂಕು ಪಂಚಾಯಿತಿಗಳ ಅಧ್ಯಕ್ಷರು
2. ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
3. ನಿರ್ದೇಶಕರು (ಪಂ.ರಾಜ್-1) ಮತ್ತು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
4. ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ, ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
7. ಗಣಕ ಕೇಂದ್ರ-ಇಲಾಖೆಯ ವೆಬ್ ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
8. ಹೆಚ್ಚುವರಿ ಪ್ರತಿ.

## ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 169 ಸ್ವೀಮರ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:18-10-2016.

## ಸುತ್ತೋಲೆ

ವಿಷಯ: ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993ರ ವಿವಿಧ ಕಲಂ ಗಳಡಿ ದಾಖಲಾಗಿರುವ ಅರ್ಜಿಗಳು ಮತ್ತು ಮೇಲ್ಮನವಿ ಪ್ರಕರಣಗಳನ್ನು ತ್ವರಿತವಾಗಿ ಇತ್ಯರ್ಥಪಡಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಕರ್ನಾಟಕ ಉಚ್ಚ ನ್ಯಾಯಾಲಯವು ರಿಟ್ ಅರ್ಜಿ ಸಂಖ್ಯೆ: 33297-88/2016ರಲ್ಲಿ ನೀಡಿರುವ ನಿರ್ದೇಶನ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993ರ ಕಲಂ 64, 201, 269, 237, 43(ಎ), 136 ಮತ್ತು 175ರ ಅಡಿಯಲ್ಲಿ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತಿ/ಜಿಲ್ಲಾ ಪಂಚಾಯತಿ ಅಧ್ಯಕ್ಷರು ಹಾಗೂ ಸರ್ಕಾರದ ಹಂತದಲ್ಲಿ ಅರ್ಜಿಗಳು ಮತ್ತು ಮೇಲ್ಮವಿಗಳು ದಾಖಲಾಗುತ್ತಿರುವುದು ಸರಿಯಷ್ಟೆ. ಇವುಗಳು ಅರೆ ನ್ಯಾಯಿಕ ಪ್ರಕರಣಗಳಾಗಿದ್ದು ಸಂಬಂಧಪಟ್ಟ ಅರ್ಜಿದಾರರು, ಪ್ರತಿವಾದಿಗಳು ಹಾಗೂ ಅವಶ್ಯಕ ಇನ್ನಿತರೆ ಸಂಬಂಧಿತರಿಗೆ ನಿಯಮಾನುಸಾರ ನೋಟೀಸ್‌ಗಳನ್ನು ಶಾಸನಬದ್ಧ ಪ್ರಾಧಿಕಾರಗಳು ಜಾರಿ ಮಾಡಿ, ದಾಖಲೆಗಳನ್ನು ಪಡೆದು ಅಹವಾಲುಗಳನ್ನು ಆಲಿಸುವ ಮೂಲಕ ವಿಚಾರಣೆಯನ್ನು ನಡೆಸಿ ನಂತರ ಚಾಲ್ತಿಯಲ್ಲಿರುವ ಕಾನೂನಿನನುಸಾರ ತೀರ್ಪು/ಆದೇಶಗಳನ್ನು ಹೊರಡಿಸಬೇಕಾಗುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆಯ ಅಡಿಯಲ್ಲಿ ದಾಖಲಾಗುವ ಪ್ರಕರಣಗಳನ್ನು ತ್ವರಿತವಾಗಿ ವಿಲೇಗೊಳಿಸುವುದು ಅವಶ್ಯವಿರುತ್ತದೆ. ಅನೇಕ ಪ್ರಕರಣಗಳಲ್ಲಿ ಮೇಲೆ ತಿಳಿಸಿದ ವಿಧಿ ವಿಧಾನವನ್ನು ಅನುಸರಿಸಿ ಪ್ರಕರಣ ಇತ್ಯರ್ಥಪಡಿಸುವಲ್ಲಿ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಕೆಲವು ಪ್ರಕರಣಗಳಲ್ಲಿ ವಿಚಾರಣೆಯನ್ನು ಕೈಗೆತ್ತಿಕೊಂಡ ಸಂದರ್ಭಗಳಲ್ಲಿ ಅನವಶ್ಯಕವಾಗಿ ದೀರ್ಘಕಾಲದವರೆಗೆ ಮುಂದೂಡುತ್ತಿರುವುದು ಹಾಗೂ ವಿಚಾರಣೆ ಪೂರ್ಣಗೊಂಡ ನಂತರ ಅಂತಿಮ ತೀರ್ಪು/ಆದೇಶಗಳನ್ನು ಪ್ರಕಟಿಸುವಲ್ಲಿ ಸಹ ವಿಳಂಬವಾಗುತ್ತಿರುವುದು ಕಂಡುಬಂದಿರುತ್ತದೆ.

ಈ ರೀತಿ ಕಾಯ್ದೆಯಡಿ ದಾಖಲಾಗುವ ಪ್ರಕರಣಗಳನ್ನು ಇತ್ಯರ್ಥಪಡಿಸುವಲ್ಲಿ ವಿಳಂಬವಾಗುತ್ತಿರುವ ಮಾಹಿತಿಯು ಮೇಲೆ ಉಲ್ಲೇಖಿಸಿರುವ ರಿಟ್ ಅರ್ಜಿಗಳ ಪ್ರಕರಣವೊಂದರಲ್ಲಿ ಮಾನ್ಯ ಉಚ್ಚ ನ್ಯಾಯಾಲಯದ ಗಮನಕ್ಕೆ ಬಂದಿರುತ್ತದೆ. ಇದನ್ನು ಮಾನ್ಯ ಉಚ್ಚ ನ್ಯಾಯಾಲಯವು ತೀವ್ರವಾಗಿ ಗಮನಿಸಿ ಅರೆ ನ್ಯಾಯಿಕ ಪ್ರಾಧಿಕಾರಗಳು ತಮ್ಮ ಶಾಸನಬದ್ಧ ಅಧಿಕಾರವನ್ನು ಚಲಾಯಿಸುವಲ್ಲಿ ಸರಿಯಾಗಿ ಕಾರ್ಯನಿರ್ವಹಣೆ ಮಾಡದಿರುವುದಕ್ಕೆ ಅತೃಪ್ತಿ ವ್ಯಕ್ತಪಡಿಸಿದೆ.

ಆದ್ದರಿಂದ, ಮೇಲೆ ತಿಳಿಸಿರುವಂತೆ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993ರಡಿ ದಾಖಲಾಗುವ ಅರೆ ನ್ಯಾಯಿಕ ಪ್ರಕರಣಗಳನ್ನು ಸಂಬಂಧಪಟ್ಟ ಪ್ರಾಧಿಕಾರಗಳು ತ್ವರಿತವಾಗಿ ವಿಲೇ ಮಾಡುವ ದೃಷ್ಟಿಯಿಂದ ಪ್ರತಿವಾರದಲ್ಲಿ ಕನಿಷ್ಟ 2 ಬಾರಿ ನಿಯತಕಾಲಿಕವಾಗಿ ವಿಚಾರಣೆಗಳನ್ನು ನಿಗಧಿಪಡಿಸಿ ಪ್ರಕರಣ ಇತ್ಯರ್ಥಪಡಿಸಲು ಕ್ರಮ ವಹಿಸತಕ್ಕದ್ದು. ಯಾವುದೇ ಕಾರಣಕ್ಕೆ ವಿಚಾರಣೆಗಳನ್ನು ದೀರ್ಘಾವಧಿಗೆ ಮುಂದೂಡಬಾರದೆಂದು ಹಾಗೂ ತೀರ್ಪಿಗಾಗಿ ಕಾಯ್ದಿರಿಸಿದಂತಹ ಪ್ರಕರಣಗಳಲ್ಲಿಯೂ ಸಹ ಯಾವುದೇ ವಿಳಂಬವಿಲ್ಲದೇ ಆದೇಶಗಳನ್ನು ಘೋಷಿಸುವುದಕ್ಕೆ ಕ್ರಮ ಕೈಗೊಳ್ಳಬೇಕೆಂದು ಈ ಮೂಲಕ ತಿಳಿಯಪಡಿಸಿದೆ.

**(ಡಾ॥ ಎನ್.ನಾಗಾಂಬಿಕಾದೇವಿ)**
ಸರ್ಕಾರದ ಪ್ರಧಾನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

**ಇವರಿಗೆ:**

1. ಎಲ್ಲಾ ಜಿಲ್ಲಾ ಪಂಚಾಯತಿಗಳ/ತಾಲ್ಲೂಕು ಪಂಚಾಯತಿಗಳ ಅಧ್ಯಕ್ಷರು.
2. ಎಲ್ಲಾ ಜಿಲ್ಲಾ ಪಂಚಾಯತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
3. ನಿರ್ದೇಶಕರು (ಪಂ.ರಾಜ್-1) ಮತ್ತು (ಪಂ.ರಾಜ್-2), ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
4. ಎಲ್ಲಾ ತಾಲ್ಲೂಕು ಪಂಚಾಯತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.
5. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಕಂದಾಯ ಇಲಾಖೆ.
6. ಸರ್ಕಾರದ ಪ್ರಧಾನ ಕಾರ್ಯದರ್ಶಿ ರವರ ಆಪ್ತ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
7. ಗಣಕ ಕೇಂದ್ರ-ಇಲಾಖೆಯ ವೆಬ್ ಸೈಟ್‌ನಲ್ಲಿ ಪ್ರಕಟಿಸುವ ಸಲುವಾಗಿ.
8. ಹೆಚ್ಚುವರಿ ಪ್ರತಿ.